All India Radio: Bangalore
Regional Bulletin In Kannada

27.11.2025 6.40 PM

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
***************

ಮುಖ್ಯಾಂಶಗಳು

- ಬೆಂಗಳೂರಿನಲ್ಲಿ ನೀರಿನ ಬಿಲ್ ಪಾವತಿಸಿದರೆ ಬಡ್ಡಿ ಮನ್ನಾ; ಮೈಸೂರು ಮಹಾನಗರ ಪಾಲಿಕೆ ಮೇಲ್ದರ್ಜೆಗೆ - ಸಂಪುಟ ಸಭೆಯಲ್ಲಿ ನಿರ್ಧಾರ
- ಉಡುಪಿಗೆ ನಾಳೆ ಪ್ರಧಾನಿ ನರೇಂದ್ರ ಮೋದಿ ಭೇಟಿ; ಜಿಲ್ಲೆಯಾದ್ಯಂತ ಬಿಗಿಭದ್ರತೆ
- ಅಧಿಕಾರ ಹಂಚಿಕೆ ವಿಚಾರ; ಹೈಕಮಾಂಡ್ ಆಹ್ವಾನಿಸಿದರೆ ದೆಹಲಿಗೆ ತೆರಳಲು ಸಿದ್ಧ- ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಸ್ಪಷ್ಟನೆ
- 'ಶಾಲೆಯ ಅಂಗಳದಲ್ಲಿ ತಾರಾಲಯ' ಯೋಜನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಸಿರು ನಿಶಾನೆ
- ಔಷಧೀಯ ಸಸ್ಯ ಮತ್ತು ಗಿಡ ಮೂಲಿಕೆ ಬೆಳೆಯುವ ರೈತರಿಗೆ ಇ-ಮಾರುಕಟ್ಟೆ ವೇದಿಕೆ ಕಲ್ಪಿಸಲು ಸಚಿವ ಈಶ್ವರ್ ಖಂಡ್ರ ಸೂಚನೆ

***************

ಬೆಂಗಳೂರಿನಲ್ಲಿ ನೀರಿನ ಬಿಲ್ ಬಾಕಿ ಮತ್ತು ಅಸಲು ಪಾವತಿಸಿದರೆ ಬಡ್ಡಿ ಮನ್ನಾ ಮಾಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಂಪುಟ ಸಭೆಯಲ್ಲಿ ನಿರ್ಧರಿಸಲಾಗಿದೆ.

ಇದೇ ವೇಳೆ, ಮೈಸೂರು ಮಹಾನಗರ ಪಾಲಿಕೆ ಗ್ರೇಡ್-೧ ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೆ ಏರಿಸಲು ತೀರ್ಮಾನಿಸಲಾಗಿದೆ. ಅಕ್ಕಪಕ್ಕದ ಗ್ರಾಮಗಳ ಸೇರ್ಪಡೆಗೂ ಸಂಪುಟ ಸಭೆಯಲ್ಲಿ ಒಪ್ಪಿಗೆ ಸೂಚಿಸಲಾಗಿದೆ.

ಧ್ವನಿ: ಎಚ್.ಕೆ.ಪಾಟೀಲ್ ( ೩೦ ಸೆಕೆಂಡ್ಸ್)

ಬೆಳಗಾವಿ ಜಿಲ್ಲೆಯ ಸವದತ್ತಿ ತಾಲೂಕಿನ ಮುರುಗೋಡು ಗ್ರಾಮದಲ್ಲಿ ಐದು ಎಕರೆ ಸರ್ಕಾರಿ ಜಮೀನನ್ನು ಬಳೆ ತಯಾರಕರ ಫೌಂಡೇಷನ್‌ಗೆ, ಬಳೆ ಕ್ಲಸ್ಟರ್ ಘಟಕಗಳಿಗೆ ನೀಡಲು ನಿರ್ಧರಿಸಲಾಗಿದೆ.

***************

ಪ್ರಧಾನಿ ನರೇಂದ್ರ ಮೋದಿ ಅವರು ಉಡುಪಿಯ ಶ್ರೀ ಕೃಷ್ಣ ಮಠಕ್ಕೆ ನಾಳೆ ಭೇಟಿ ನೀಡಲಿದ್ದಾರೆ. ಶ್ರೀಕೃಷ್ಣನ ದರ್ಶನ ಪಡೆಯಲಿರುವ ಅವರು, ಲಕ್ಷಕಂಠ ಗೀತಾ ಪಾರಾಯಣದಲ್ಲಿ ಭಾಗವಹಿಸಲಿದ್ದಾರೆ.

ಕೃಷ್ಣ ಗರ್ಭಗುಡಿಯ ಮುಂಭಾಗದಲ್ಲಿರುವ ಸುವರ್ಣ ತೀರ್ಥ ಮಂಟಪವನ್ನು ಉದ್ಘಾಟಿಸಲಿದ್ದಾರೆ. ಜೊತೆಗೆ ಪವಿತ್ರ ಕನಕನ ಕಿಂಡಿಗೆ ಕನಕ ಕವಚವನ್ನು ಅರ್ಪಿಸಲಿದ್ದಾರೆ.

ಲಕ್ಷಕಂಠ ಗೀತಾ ಪಾರಾಯಣ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು, ಸಾಧುಗಳು, ವಿದ್ವಾಂಸರು ಹಾಗೂ ಭಕ್ತರು ಸೇರಿದಂತೆ ಒಂದು ಲಕ್ಷಕ್ಕೂ ಹೆಚ್ಚು ಮಂದಿ ಭಾಗವಹಿಸಿ ಭಕ್ತಿ ಸಭೆ ಹಾಗೂ ಭಗವದ್ಗೀತೆಯನ್ನು ಒಟ್ಟಾಗಿ ಪಠಿಸಲಿದ್ದಾರೆ. ಮಂಗಳೂರಿಗೆ ವಿಶೇಷ ವಿಮಾನದಲ್ಲಿ ಆಗಮಿಸುವ ಅವರು, ಬಳಿಕ ಉಡುಪಿಗೆ ತೆರಳಲಿದ್ದಾರೆ.

ಪ್ರಧಾನಿ ಭೇಟಿ ನೀಡುತ್ತಿರುವ ಹಿನ್ನೆಲೆಯಲ್ಲಿ ದಕ್ಷಿಣ ಕನ್ನಡ, ಉಡುಪಿ ಜಿಲ್ಲೆಯಲ್ಲಿ ಬಿಗಿಬಂದೋಬಸ್ತ್ ಏರ್ಪಡಿಸಲಾಗಿದೆ. ಉಡುಪಿ ಜಿಲ್ಲೆಯಲ್ಲಿ ಡ್ರೋನ್ ಹಾರಾಟ ನಿಷೇಧಿಸಲಾಗಿದೆ. ಶ್ರೀಕೃಷ್ಣ ಮಠಕ್ಕೆ ಏಳು ಗಂಟೆಗಳ ಕಾಲ ಭಕ್ತರಿಗೆ ದರ್ಶನ ನಿರ್ಬಂಧಿಸಲಾಗಿದೆ.

***************

ಅಧಿಕಾರ ಹಂಚಿಕೆ ಕುರಿತಂತೆ ಹೈಕಮಾಂಡ್ ಆಹ್ವಾನಿಸಿದರೆ ದೆಹಲಿಗೆ ತೆರಳುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಡಿ.ಕೆ.ಶಿವಕುಮಾರ್, ಹೈಕಮಾಂಡ್ ಆಹ್ವಾನಿಸಿದರೆ ದೆಹಲಿಗೆ ತೆರಳುವುದಾಗಿ ಸ್ಪಷ್ಟಪಡಿಸಿದ್ದಾರೆ.

ರಾಜ್ಯದಲ್ಲಿನ ನಾಯಕತ್ವ ಬಿಕ್ಕಟ್ಟನ್ನು ಪರಿಹರಿಸಲು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು, ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ನವದೆಹಲಿಗೆ ಆಹ್ವಾನಿಸಿದ್ದರು.

***************

ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ವಿಶ್ವಮಟ್ಟದ ವಿಜ್ಞಾನ ಶಿಕ್ಷಣವನ್ನು ತಲುಪಿಸುವ ಮಹತ್ವಾಕಾಂಕ್ಷಿ “ಶಾಲೆಯ ಅಂಗಳದಲ್ಲಿ ತಾರಾಲಯ” ಡಿಜಿಟಲ್ ಮೊಬೈಲ್ ತಾರಾಲಯ ಯೋಜನೆಗೆ ವಿಧಾನಸೌಧದಲ್ಲಿ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹಸಿರು ನಿಶಾನೆ ತೋರಿದರು.

ಬಳಿಕ ಮಾತನಾಡಿದ ಅವರು, "ಗ್ರಾಮೀಣ ಭಾಗದ ವಿದ್ಯಾರ್ಥಿಗಳಲ್ಲಿ ಖಗೋಳ ವಿಜ್ಞಾನದ ಕೌತುಕವನ್ನು ಬಿತ್ತಿ, ವಿಜ್ಞಾನ ಕಲಿಕೆಯಲ್ಲಿ ಕ್ರಾಂತಿಕಾರಿ ಬದಲಾವಣೆ ತರುವುದು ಸರ್ಕಾರದ ಪ್ರಮುಖ ಗುರಿಯಾಗಿದೆ ಎಂದು ಹೇಳಿದರು.

ಈ ಯೋಜನೆ ಈಗಾಗಲೇ ೧೭ ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳನ್ನು ತಲುಪಿದೆ ಎಂದು ತಿಳಿಸಿದರು.

***************

ಪ್ರಸಕ್ತ ಸಾಲಿನಲ್ಲಿ ಅತಿವೃಷ್ಟಿಯಿಂದ ಉಂಟಾದ ಬೆಳೆಹಾನಿಗೆ ಹಾವೇರಿ ಜಿಲ್ಲೆಯ ರೈತರಿಗೆ ೨೮ ಕೋಟಿ ೮೪ ಲಕ್ಷ ರೂಪಾಯಿ ಬೆಳೆಹಾನಿ ಪರಿಹಾರ ಮಂಜೂರು ಮಾಡಲಾಗಿದೆ ಎಂದು ಹಾವೇರಿ ಜಿಲ್ಲಾ ಉಸ್ತುವಾರಿ ಸಚಿವ ಶಿವಾನಂದ ಪಾಟೀಲ್ ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ೧೬ ಸಾವಿರ ೮೦೧ ಹೆಕ್ಟೇರ್ ಬೆಳೆ ಹಾನಿಯಾಗಿದ್ದು, ಎಸ್.ಡಿ.ಆರ್‌ಎಫ್ ಮಾರ್ಗಸೂಚಿ ಅನ್ವಯ ಈಗಾಗಲೇ ೩೩ ಸಾವಿರ ೭೨೬ ರೈತರಿಗೆ ೧೪ ಕೋಟಿ ೬೬ ಲಕ್ಷ ರೂಪಾಯಿ ಡಿಬಿಟಿ ಮೂಲಕ ಜಮೆ ಮಾಡಲಾಗಿತ್ತು. ಇಂದು ಮುಖ್ಯಮಂತ್ರಿಗಳು ಹಾಗೂ ಕಂದಾಯ ಸಚಿವರು ಹೆಚ್ಚುವರಿಯಾಗಿ ಪ್ರತಿ ಹೆಕ್ಟೇರಗೆ ೮ ಸಾವಿರದ ೫೦೦ ರೂಪಾಯಿಯಂತೆ ಜಿಲ್ಲೆಯ ೩೩ ಸಾವಿರ ೭೨೫ ರೈತರ ಖಾತೆಗೆ ೧೪ ಕೋಟಿ ೧೮ ಲಕ್ಷ ರೂಪಾಯಿ ಬೆಳೆಹಾನಿ ಪರಿಹಾರ ಜಮೆಗೆ ಚಾಲನೆ ನೀಡಿದ್ದಾರೆ ಎಂದು ಹೇಳಿದ್ದಾರೆ.

***************

ಔಷಧೀಯ ಸಸ್ಯ ಮತ್ತು ಗಿಡಮೂಲಿಕೆ ಬೆಳೆಯುವ ರೈತರಿಗೆ ಇ-ಮಾರುಕಟ್ಟೆ ರೀತಿಯಲ್ಲಿ ವೇದಿಕೆ ಕಲ್ಪಿಸಲು ಸಹಯೋಗ ಮತ್ತು ಸಹಕಾರ ನೀಡುವಂತೆ ಅಧಿಕಾರಿಗಳಿಗೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸೂಚಿಸಿದ್ದಾರೆ.

ಕರ್ನಾಟಕ ರಾಜ್ಯ ಔಷಧಿ ಗಿಡಮೂಲಿಕಾ ಪ್ರಾಧಿಕಾರ ಮತ್ತು ಅರಣ್ಯ ಇಲಾಖೆ ಸಹಯೋಗದಲ್ಲಿಂದು ಚಿತ್ರಕಲಾ ಪರಿಷತ್ತಿನಲ್ಲಿ ನಡೆದ ಚಿಂತನ ಮಂಥನದಲ್ಲಿ ಮಾತನಾಡಿದ ಅವರು, ಹಲವರು ಮಾಹಿತಿ ಕೊರತೆಯಿಂದ ಔಷಧೀಯ ಸಸ್ಯಗಳನ್ನು ಕಳೆ ಎಂದು ನಾಶ ಮಾಡುತ್ತಿದ್ದಾರೆ. ಈ ಬಗ್ಗೆ ರೈತರಲ್ಲಿ ಜಾಗೃತಿ ಮೂಡಿಸಿ, ಗಿಡಮೂಲಿಕೆ ಸಂರಕ್ಷಿಸಲು ಅರಿವು ಮೂಡಿಸಬೇಕಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಪಶ್ಚಿಮ ಘಟ್ಟ ಅಪರೂಪದ ಸಸ್ಯಸಂಕುಲ, ಕೀಟ ಸಂಕುಲ ಹಾಗೂ ಪ್ರಾಣಿ ಸಂಕುಲದ ತಾಣವಾಗಿರುವುದರ ಜೊತೆಗೆ ಜಾಗತಿಕ ಜೀವವೈವಿಧ್ಯತೆಯ ತಾಣವಾಗಿದೆ. ಇಲ್ಲಿರುವ ಅಮೂಲ್ಯ ಹಸಿರು ಸಂಪತ್ತನ್ನು ಸಂರಕ್ಷಿಸುವ ಜವಾಬ್ದಾರಿ ಪ್ರತಿಯೊಬ್ಬರ ಕರ್ತವ್ಯ ಎಂದು ತಿಳಿಸಿದ್ದಾರೆ.

***************

ವಿಶ್ವಕಪ್ ಗೆದ್ದ ಭಾರತದ ಮಹಿಳಾ ಕಬಡ್ಡಿ ತಂಡದ ರಾಜ್ಯದ ಆಟಗಾರ್ತಿ ಧನಲಕ್ಷ್ಮಿ, ಚೀನಾದಲ್ಲಿ ನಡೆದ ಏಷ್ಯನ್ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್‌ನಲ್ಲಿ ಬೆಳ್ಳಿ ಗೆದ್ದ ಲಕ್ಷ್ಯ ರಾಜೇಶ್ ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಅಭಿನಂದಿಸಿದರು.

ಇಬ್ಬರೂ ಕ್ರೀಡಾಪಟುಗಳಿಗೆ ತಲಾ ಐದು ಲಕ್ಷದ ಚೆಕ್ ವಿತರಿಸುವಂತೆ ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳಿಗೆ ಸೂಚಿಸಿದರು.

ಇದೇ ಸಂದರ್ಭದಲ್ಲಿ ಬ್ಯಾಡ್ಮಿಂಟನ್ ಅಸೋಸಿಯೇಷನ್ ಸಂಸ್ಥೆಗೆ ನಿವೇಶನ ಒದಗಿಸುವಂತೆ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

***************

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿ ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ಬೀದಿ ನಾಯಿಗಳ ಮಾಹಿತಿ ಸಂಗ್ರಹಿಸಲು ವಿವಿಧ ಇಲಾಖೆ ಹಾಗೂ ಸಂಸ್ಥೆಗಳಿಗೆ ಐದೂ ನಗರ ಪಾಲಿಕೆಗಳಿಂದ ನೋಟೀಸ್ ಜಾರಿ ಮಾಡಲಾಗಿದೆ.

ಗೂಗಲ್ ಫಾರ್ಮ್ ಮೂಲಕ ಮಾಹಿತಿ ಒದಗಿಸಲು ಸಂಸ್ಥೆಗಳಿಗೆ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಸೂಚನೆ ನೀಡಿದ್ದಾರೆ.

ಆದೇಶ ಪಾಲನೆ ಮಾಡಿರುವ ಬಗ್ಗೆ ಸರ್ವೋಚ್ಚ ನ್ಯಾಯಾಲಯಕ್ಕೆ ೮ ವಾರಗಳೊಳಗೆ ಅಫಿಡವಿಟ್ ಸಲ್ಲಿಸಲು ನಿರ್ದೇಶನ ನೀಡಲಾಗಿದೆ ಎಂದು ಹೇಳಿದ್ದಾರೆ.

***************

ಕಾರವಾರದ ರವೀಂದ್ರನಾಥ ಠಾಗೂರ್ ಕಡಲತೀರದಲ್ಲಿ ಡಿಸೆಂಬರ್ ೨೨ ರಿಂದ ೨೮ ರ ವರೆಗೆ ೭ ದಿನಗಳ ಕಾಲ ಕರಾವಳಿ ಉತ್ಸವ ಕಾರ್ಯಕ್ರಮವನ್ನು ಆಯೋಜಿಸಲಾಗುವುದು ಎಂದು ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯ ತಿಳಿಸಿದ್ದಾರೆ.

ಡಿಸೆಂಬರ್ ೨೨ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ಅಂದು ಮುಖ್ಯಮಂತ್ರಿಗಳು, ಜಿಲ್ಲಾಧಿಕಾರಿಗಳ ನೂತನ ಕಚೇರಿ ಕಟ್ಟಡ, ಕ್ರಿಮ್ಸ್ ಆಸ್ಪತ್ರೆ ಕಟ್ಟಡ, ಮಂಜುಗುಣಿ ಸೇತುವೆ ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ ನೆರವೇರಿಸಲಿದ್ದಾರೆ.

***************

ಇತಿಹಾಸವನ್ನ ಉಳಿಸಲು ಇತಿಹಾಸದ ದಾಖಲೆಗಳು ಬಹಳ ಮುಖ್ಯವಾಗಿದೆ ಎಂದು ಮಂಡ್ಯ ವಿಶ್ವವಿದ್ಯಾಲಯ ಕುಲಪತಿ ಪ್ರೊಫೆಸರ್ ಕೆ.ಶಿವಚಿತ್ತಪ್ಪ ತಿಳಿಸಿದ್ದಾರೆ.

ಮಂಡ್ಯ ನಗರದ ಮಹಿಳಾ ಸರ್ಕಾರಿ ಕಾಲೇಜಿನ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಐತಿಹಾಸಿಕ ದಾಖಲೆಗಳ ಮತ್ತು ಛಾಯಾ ಚಿತ್ರ ಪ್ರದರ್ಶನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ದಾಖಲೆಗಳು ಇಲ್ಲವಾದರೆ ಇತಿಹಾಸವನ್ನು ತಿಳಿಯಲು ಸಾಧ್ಯವಾಗುವುದಿಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ.

ವಿದ್ಯಾರ್ಥಿಗಳಾಗಿ ಜೀವನ ಮೌಲ್ಯಗಳನ್ನು ತಿಳಿದು ಮುಂದಿನ ನಿಮ್ಮ ಜೀವನದ ಇತಿಹಾಸವನ್ನು ನೀವೇ ಸೃಷ್ಟಿಸಿ ಎಂದು ಕರೆ ನೀಡಿದ್ದಾರೆ.

***************

ರಾಷ್ಟ್ರೀಯತೆಯ ಪ್ರತಿಪಾದನೆ ಭಾರತದಲ್ಲಿ ಗಂಭೀರ ಸಾಂಸ್ಕೃತಿಕ ಬಿಕ್ಕಟ್ಟಿನ ವಾತಾವರಣದ ಆತಂಕ ಸೃಷ್ಟಿಸಿದೆ ಎಂದು ಪ್ರಗತಿಪರ ಚಿಂತಕ ಹಾಗೂ ಲೇಖಕರಾದ ಪ್ರೊಫೆಸರ್ ರಾಜೇಂದ್ರ ಚೆನ್ನಿ  ಅಭಿಪ್ರಾಯಪಟ್ಟಿದ್ದಾರೆ.

ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಜಾಗತಿಕ ಭಾಷೆಗಳ ಕೇಂದ್ರದಲ್ಲಿ ಏರ್ಪಡಿಸಲಾಗಿದ್ದ "ಭಾಷೆ, ಸಂಸ್ಕೃತಿ, ವಿಶ್ವಶಾಂತಿ- ಶಾಂತಿಯುತ ಜಗತ್ತಿಗಾಗಿ ಸಂವಾದ" ಎಂಬ ವಿಷಯ ಕುರಿತ ಎರಡು ದಿನಗಳ  ಅಂತಾರಾಷ್ಟ್ರೀಯ ಸಮ್ಮೇಳನದಲ್ಲಿ ಮಾತನಾಡಿದ ಅವರು ಭಾರತದಲ್ಲಿ ವ್ಯಕ್ತಿ ಸ್ವಾತಂತ್ರ್ಯ ಮತ್ತು ಆಯ್ಕೆ ಸ್ವಾತಂತ್ರ್ಯವನ್ನು ಎತ್ತಿಹಿಡಿಯುವ ಮೂಲಕ ಸಾಮಾಜಿಕ ಸಾಮರಸ್ಯ ಕಾಪಾಡಬಹುದೆಂದು ಅವರು ವಿಶ್ಲೇಷಿಸಿದರು.

********ಮುಕ್ತಾಯ*******